ನಿ: 330 (67)

**ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪುಟ್ಟಣ್ಣ ಇವರ ನಿಯಮ-330ರಡಿಯಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಸರ್ಕಾರದ ಉತ್ತರ.**

**ವಿಷಯ:**

2006ರಿಂದ ಈಚೆಗೆ ನೇಮಕವಾಗಿರುವ ಶಿಕ್ಷಕರು ಹಾಗೂ ಎಲ್ಲಾ ಸರ್ಕಾರಿ ನೌಕರರಿಗೆ ಜಾರಿಗೆ ತಂದಿರುವ ಹೊಸ ಪಿಂಚಣಿ ಯೋಜನೆಯನ್ನು ಜಾರಿಗೊಳಿಸಲಾಗಿದೆ ಹೊಸ ಪಿಂಚಣಿ ಯೋಜನೆಯನ್ನು ಸಮರ್ಪಕವಾಗಿ ಇದುವರೆಗೆ ಜಾರಿಗೊಳಿಸಿರುವುದಿಲ್ಲ. ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರಿಗೆ ಇದುವರೆವಿಗೂ ಈ ಯೋಜನೆಯನ್ನು ಜಾರಿಗೊಳಿಸದೆ ಹಲವಾರು ನೌಕರರು ಈಗಾಗಲೇ ನಿವೃತ್ತಿಯಾಗಿದ್ದು ಜೀವನ ನಡೆಸಲು ತುಂಬಾ ತೊಂದರೆಯಾಗಿದೆ ಆದ್ದರಿಂದ 2006ರ ನಂತರ ನೇಮಕವಾಗಿರುವ ಎಲ್ಲಾ ನೌಕರರಿಗೂ ಹಳೆಯ ಪಿಂಚಣಿ ವ್ಯವಸ್ಥೆಯನ್ನು ಕಡ್ಡಾಯವಾಗಿ ಜಾರಿಗೆ ತರಬೇಕೆಂಬ ವಿಷಯದ ಬಗ್ಗೆ ಸದನದಲ್ಲಿ ಪ್ರಸ್ತಾಪ ಬಯಸುತ್ತೇನೆ.

**ಉತ್ತರ:**

ದಿನಾಂಕ:01.04.2006ನಂತರ ನೇಮಕ ಹೊಂದಿದ ಸಿಬ್ಬಂದಿಗಳು ಕಡ್ಡಾಯವಾಗಿ ಸರ್ಕಾರದ ಆದೇಶ ಸಂಖ್ಯೆ: FD (SPL)04 PET 2005 ದಿನಾಂಕ:31.03.2006ರನ್ವಯ ಅಂಶದಾಯಿ ಪಿಂಚಣಿ ಕೊಡುಗೆ ಯೋಜನೆಗೆ (ಎನ್.ಪಿ.ಎಸ್)ಒಳಪಡುತ್ತಾರೆ. ಸರ್ಕಾರದ ಆದೇಶ ಸಂಖ್ಯೆ:ಆಇ34ಪಿಇಎಸ್ 2018 ದಿನಾಂಕ:23.06.2018 ರಲ್ಲಿ ಅಂಶದಾಯಿ ಪಿಂಚಣಿ ಕೊಡುಗೆ ಯೋಜನೆಯಡಿ ಬರುವ ಸರ್ಕಾರಿ ನೌಕರರಿಗೆ ನಿವೃತ್ತಿ ಉಪದಾನ, ಮರಣ ಉಪದಾನ ಮತ್ತು ಕುಟುಂಬ ಪಿಂಚಣಿಯನ್ನು ವಿಸ್ತರಿಸಲಾಗಿದೆ.

ದಿನಾಂಕ:01.04.2006ರ ಪಿಂಚಣಿ ನೀತಿಯಲ್ಲಿ ಸರ್ಕಾರಿ ಅನುದಾನಿತ ಶಾಲೆಗಳ ನೌಕರರಿಗೆ ಪಿಂಚಣಿ ಒದಗಿಸುವ ಕುರಿತು ಸರ್ಕಾರದ ಆದೇಶ ಸಂಖ್ಯೆ:FD(SPL)04PET 2005, ದಿನಾಂಕ:31.03.2006ರ ಕ್ರಮ ಸಂಖ್ಯೆ:08ರಲ್ಲಿ ಈ ಕೆಳಗಿನಂತೆ ಆದೇಶಿಸಿದೆ.

....(8) ಸಹಾಯಾನುದಾನ ಶಿಕ್ಷಣ ಸಂಸ್ಥೆಗಳ ನೌಕರರಿಗೆ, ಗೊತ್ತು ಮಾಡಿದ ಪ್ರಯೋಜನ ಪಿಂಚಣಿಯನ್ನು ದಿನಾಂಕ:01.04.2006ರಂದು ಅಥವಾ ಅದರ ತರುವಾಯ ಸೇರುವ ಹೊಸದಾಗಿ ನೇಮಕಗೊಂಡ ಸಿಬ್ಬಂದಿಗೆ ನಿಲ್ಲಿಸಿ ಬಿಡತಕ್ಕದ್ದು. ನೂತನ ನಿಗಧಿತ ವಂತಿಗೆ ಪಿಂಚಣಿ ಯೋಜನೆಯು, ಆಯ್ಕೆಯ ಅವಕಾಶದ ಆಧಾರದ ಮೆಲೆ ನೌಕರನಿಗೆ ಮತ್ತು ನಿಯೋಜಕನಿಗೆ ಅನ್ವಯವಾಗತಕ್ಕದ್ದು ಮತ್ತು ಆಯ್ಕೆಯ ಅವಕಾಶವನ್ನು ಇಬ್ಬರಿಂದಲೂ ಚಲಾಯಿಸತಕ್ಕದ್ದು. ಆದರೆ, ನಿಯೋಜಕರ ವಂತಿಗೆಯನ್ನು ಸಂಬಂಧಪಟ್ಟ ಸಂಸ್ಥೆಗಳು ಭರಿಸತಕ್ಕದ್ದು. ಆದರೆ ರಾಜ್ಯ ಸರ್ಕಾರವಲ್ಲ.

- ಈ ಆದೇಶವು ದಿನಾಂಕ:01.04.2006ರಿಂದ ಜಾರಿಗೆ ಬಂದಿರುತ್ತದೆ.
- ದಿನಾಂಕ:01.04.2006ರ ನಂತರ ಅನುದಾನಸಹಿತ ಅನುಮೋದನೆಗೊಂಡ ಅನುದಾನಿತ ಖಾಸಗಿ ಶಾಲೆ/ ಕಾಲೇಜುಗಳಲ್ಲಿನ ಸಿಬ್ಬಂದಿಗಳಿಗೆ ಈ ಮೇಲಿನ ನಿಯಮ ಅನ್ವಯವಾಗುತ್ತದೆ.
- ಅನುದಾನಿತ ಸಿಬ್ಬಂದಿಗಳ ಸೇವಾ ಸೌಲಭ್ಯಗಳು ಅನುದಾನಸಹಿತವಾಗಿ ಅನುಮೋದನೆಗೊಂಡ ದಿನಾಂಕದಿಂದ ಅನ್ವಯವಾಗುತ್ತದೆ. ಆದುದರಿಂದ 2006ರ ಪೂರ್ವದಲ್ಲಿ ಅನುದಾನರಹಿತವಾಗಿ ನೇಮಕಗೊಂಡ ಸಿಬ್ಬಂದಿಗಳು ದಿನಾಂಕ:01.04.2006ರ ನಂತರ ಅನುದಾನಕ್ಕೆ ಒಳಪಟ್ಟಲ್ಲಿ; ಅಂತಹ ಸಿಬ್ಬಂದಿಗಳು ಹೊಸ ಪಿಂಚಣಿ ಯೋಜನ (ಎನ್.ಪಿ.ಎಸ್) ಯೋಜನೆಗೆ ಒಳಪಡುತ್ತಾರೆ.
- ಮೇಲೆ ತಿಳಿಸಿರುವ ಅಂಶಗಳಿಗೆ ಒಳಪಟ್ಟು ಅನುದಾನಿತ ಸಿಬ್ಬಂದಿಗಳು ಇಚ್ಛೆ ಪಟ್ಟಲ್ಲಿ ಎನ್.ಪಿ.ಎಸ್ ಯೋಜನೆಗೆ ಒಳಪಡಿಸಬಹುದಾಗಿದೆ.
- ಈ ಪಿಂಚಣಿ ಯೋಜನೆಯು ಸಂಪೂರ್ಣವಾಗಿ ಸ್ವ-ಇಚ್ಛಾ(optional)ನೆಲೆಯಲ್ಲಿ ಜಾರಿಗೊಳಿಸುವುದರಿಂದ ಕಡ್ಡಾಯಗೊಳಿಸಲು ಅವಕಾಶವಿರುವುದಿಲ್ಲ.

ಸಂಖ್ಯೆ:ಇಪಿ 107 ಎಸ್‌ಇಎಸ್ 2021

(ಎಸ್.ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು